ಇ) ಅವಶ್ಯಕತೆ ಇರುವ ಕೊಠಡಿಗಳ ನಿರ್ಮಾಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮವೇನು;

ಈ) ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಸರ್ಕಾರಿ ಪ್ರೌಢ ಶಾಲೆ 24

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ 34

ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ 20

ಒಟ್ಟು 78 ಕೊಠಡಿಗಳ ಅವಶ್ಯಕತೆ ಇರುತ್ತದೆ.

ಇ) ಸರ್ವ ಶಿಕ್ಷಣ ಅಭಿಯಾನದಡಿ 2006–07ನೇ ಸಾಲಿನಲ್ಲಿ 11 ಪ್ರಾಥಮಿಕ ಶಾಲೆಗಳಿಗೆ 11 ಕೊಠಡಿಗಳನ್ನು ಮಂಜೂರು ಮಾಡಲಾಗಿದೆ.

ಆರ್,ಐ.ಡಿ.ಎಫ್–10 ರಡಿ 2005–06ನೇ ಸಾಲಿಗೆ 6 ಸರ್ಕಾರಿ ಪ್ರೌಢಶಾಲೆಗಳಿಗೆ 9 ಕೊಠಡಿಗಳನ್ನು ಮಂಜೂರು ಮಾಡಲಾಗಿದೆ. ಕೊಠಡಿ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ.

ಈ) ಅನುದಾನದ ಲಭ್ಯತೆಯನ್ನು ಅನುಸರಿಸಿ ಹಂತ ಹಂತವಾಗಿ ಕೊಠಡಿಗಳನ್ನು ನಿರ್ಮಾಣ ಮಾಡಲಾಗುವುದು.

540(568) ಶ್ರೀ ಸುರೇಶ ಎಸ್. ಮಾರೀಹಾಳ (ಕಿತ್ತೂರು) :– ಮಾನ್ಯ ಜಲ ಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಕಿತ್ತೂರ ಕ್ಷೇತ್ರದ ಹುಣಸಿಕಟ್ಟಿ ಗ್ರಾಮದ ಹತ್ತಿರ ಮಲಪ್ರಭಾ ನದಿ ದಂಡೆಯ ಮೇಲಿರುವ ಶ್ರೀ ರುದ್ರಸ್ವಾಮಿ ಹೊಸಮಠ ದೇವಸ್ಥಾನದ ಅಭಿವೃದ್ಧಿಯ ವಿವಿಧ ಕಾಮಗಾರಿಗಳಿಗೆ ಅನುದಾನ ಮಂಜೂರು ಕೋರಿ ಪ್ರಸ್ತಾವನೆ ಸಲ್ಲಿಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಅನುದಾನ ಮಂಜೂರಾತಿ ಯಾವಾಗ ಮಾಡಲಾಗುವುದು;

ಇ) ಕಾಮಗಾರಿಗಳ ಅಂದಾಜು ವೆಚ್ಚವೆಷ್ಟು ವಿವರ ನೀಡುವುದು?

ಶ್ರೀ ಕೆ.ಎಸ್. ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು):

ಅ) ಬಂದಿದೆ.

ಆ) ಮಲಪ್ರಭಾ ಯೋಜನೆ ಪುನರ್ವಸತಿ ಕೇಂದ್ರದಲ್ಲಿನ ಕಾಮಗಾರಿಗಳು ಬಹಳ ವರ್ಷಗಳ ಹಿಂದೆಯೇ ಪೂರ್ಣಗೊಂಡಿದ್ದು, ಇಂತಹ ಕಾಮಗಾರಿಗಳಿಗಾಗಿ ವೆಚ್ಚ ಮಾಡಲು ನಿಗಮದಲ್ಲಿ ಅವಕಾಶವಿರುವುದಿಲ್ಲವಾದ್ದರಿಂದ ಈ ಪ್ರಸ್ತಾವನೆಯನ್ನು ಕೈಬಿಡಲಾಗಿದೆ.

ಇ) ರೂ. 40.00 ಲಕ್ಷಗಳು.

541(565) ಶ್ರೀ ವೈಜ್ಯನಾಥ ಪಾಟೀಲ್ (ಚಿಂಚೋಳಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಗುಲ್ಬರ್ಗಾ ವಿಭಾಗದಿಂದ ಬೇರೆ ಬೇರೆ ವಿಭಾಗಗಳಿಗೆ ವರ್ಗಾವಣೆಯಾದ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಶಿಕ್ಷಕರ ಸಂಖ್ಯೆ ಎಷ್ಟು;

ಆ) ಈ ವಿಭಾಗದಲ್ಲಿ ಶಿಕ್ಷಕರ ಕೊರತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ)

	ಪ್ರಾಥಮಿಕ	ಪ್ರೌಢ
ಬೀದರ್	23	33
ಯಾದಗೀರ	–	10
ರಾಯಚೂರು	195	31
ಕೊಪ್ಪಳ	23	05
ಬಳ್ಳಾರಿ	39	05
ಗುಲ್ಬರ್ಗಾ	139	32
ಒಟ್ಟು	**419**	**116**

ಆ) ಬಂದಿರುತ್ತದೆ.

ಇ) ಖಾಲಿ ಇರುವ ಹುದ್ದೆಗಳನ್ನು ಮುಂದಿನ ಶಿಕ್ಷಕರ ನೇಮಕಾತಿಯಲ್ಲಿ ತುಂಬಲಾಗುವುದು.

542(856) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯೂ ಸೇರಿದಂತೆ ರಾಜ್ಯದಲ್ಲಿರುವ ಸಣ್ಣ ನೀರಾವರಿ ಕೆರೆಗಳೆಷ್ಟು;

ಆ) ಈ ಕೆರೆಗಳಲ್ಲಿ ಎಷ್ಟು ಕೆರೆಗಳನ್ನು ಹೂಳೆತ್ತಲಾಗಿದೆ ಹಾಗೂ ಎಷ್ಟು ಕೆರೆಗಳನ್ನು ಹೂಳೆತ್ತಿರುವುದಿಲ್ಲ;

ಇ) ಚಾಮರಾಜನಗರ ಜಿಲ್ಲೆಯಲ್ಲಿರುವ ಸಣ್ಣ ನೀರಾವರಿ ಕೆರೆಗಳ ಸಂಖ್ಯೆ ಎಷ್ಟು;

ಈ) ಅವುಗಳು ಎಲ್ಲೆಲ್ಲಿ ಇವೆ ಹಾಗೂ ಅವುಗಳಲ್ಲಿ ಎಷ್ಟು ಕೆರೆಗಳನ್ನು ಹೂಳೆತ್ತಲಾಗಿದೆ;

ಉ) ಹೂಳೆತ್ತದಿರುವ ಕೆರೆಗಳನ್ನು ಯಾವಾಗ ಹೂಳೆತ್ತಲಾಗುವುದು?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಸಣ್ಣ ನೀರಾವರಿ ಇಲಾಖೆಯಡಿ ಒಟ್ಟು 3401 ಕೆರೆಗಳಿವೆ.